ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ವಿಧಾನ ಸಭಾ ಕ್ಷೇತ್ರವಾರು ಜಾಗೃತ ಸಮಿತಿ ರಚನೆ ಬಗ್ಗೆ.

ಉಲ್ಲೇಖ: 1) ಸರ್ಕಾರದ ಆದೇಶ ಸಂಖ್ಯೆ:ಪಿಡಿ 309 ಜಿಪಸ '94 ದಿನಾಂಕ:16-08-1996

2) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 141/ಯೋಅಅಪ/05 ದಿನಾಂಕ:18-08-2005

---

ಪ್ರಸ್ತಾವನೆ:

ಪಂಚಾಯತ್ ರಾಜ್ ಸಂಸ್ಥೆಗಳಿಂದ ಅನುಷ್ಠಾನಗೊಳ್ಳುತ್ತಿರುವ ಕಾರ್ಯಕ್ರಮಗಳ ಪರಿಶೀಲನೆಯನ್ನು ಹಾಲಿ ಇರುವ ತಾಲ್ಲೂಕು ಜಾಗೃತ ಸಮಿತಿಯಿಂದ ಕೈಗೊಳ್ಳಲಾಗುತ್ತಿದೆ. ಸದರಿ ಸಮಿತಿಗೆ ತಾಲ್ಲೂಕಿನ ಅತೀ ಹೆಚ್ಚು ವಿಧಾನಸಭಾ ಕ್ಷೇತ್ರವನ್ನು ಪ್ರತಿನಿಧಿಸುವ ವಿಧಾನಸಭಾ ಸದಸ್ಯರು ಅಧ್ಯಕ್ಷರಾಗಿರುತ್ತಾರೆ ಹಾಗೂ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಇತರ ವಿಧಾನಸಭಾ ಸದಸ್ಯರು ಸಹ-ಅಧ್ಯಕ್ಷರಾಗಿರುತ್ತಾರೆ.

ಈ ವ್ಯವಸ್ಥೆಯಿಂದಾಗಿ ವಿವಿಧ ಕಾರ್ಯಕ್ರಮಗಳಡಿ, ಫಲಾನುಭವಿಗಳ ಆಯ್ಕೆ ಹಾಗೂ ಯೋಜನೆಗಳನ್ನು ರೂಪಿಸುವಲ್ಲಿ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಆದ್ದರಿಂದ ಪ್ರಸ್ತುತ ತಾಲ್ಲೂಕು ಜಾಗೃತ ಸಮಿತಿಯ ಬದಲಿಗೆ ವಿಧಾನಸಭಾ ಸದಸ್ಯರ ಅಧ್ಯಕ್ಷತೆಯಲ್ಲಿ ವಿಧಾನಸಭಾ ಕ್ಷೇತ್ರವಾರು ಜಾಗೃತ ಸಮಿತಿಯನ್ನು ರಚಿಸಲು ಸರ್ಕಾರವು ನಿರ್ಧರಿಸಿರುತ್ತದೆ. ಆದ್ದರಿಂದ ಈ ಆದೇಶ.

ಆದೇಶ ಸಂಖ್ಯೆ: ಗ್ರಾಅಪ 18 ಯೋಅಅಪ 2010 ದಿನಾಂಕ 18-01-2010 ಬೆಂಗಳೂರು.

ಪಂಚಾಯತ್ ರಾಜ್ ಸಂಸ್ಥೆಗಳಿಂದ ಅನುಷ್ಠಾನಗೊಳ್ಳುತ್ತಿರುವ ಸರ್ಕಾರದ ಕಾರ್ಯಕ್ರಮಗಳ ಪರಿಶೀಲನೆ ಮಾಡಲು ಉಲ್ಲೇಖ (2) ರ ಆದೇಶದ ಮೂಲಕ ರಚಿಸಲಾಗಿದ್ದ ತಾಲ್ಲೂಕು ಜಾಗೃತ ಸಮಿತಿಯ ಬದಲಿಗೆ ವಿಧಾನ ಸಭಾ ಕ್ಷೇತ್ರವಾರು ಜಾಗೃತ ಸಮಿತಿಯನ್ನು ಈ ಕೆಳಕಂಡಂತೆ ರಚನೆ ಮಾಡಲಾಗಿದೆ.

| | | |
|---|---|---|
| 1) | ವಿಧಾನ ಸಭಾ ಕ್ಷೇತ್ರವನ್ನು ಪ್ರತಿನಿಧಿಸುವ ವಿಧಾನ ಸಭಾ ಸದಸ್ಯರು | ಅಧ್ಯಕ್ಷರು |
| 2) | ಸಂಬಂಧಿಸಿದ ವಿಧಾನ ಸಭಾ ಕ್ಷೇತ್ರದಲ್ಲಿ ವಾಸವಾಗಿರುವ ವಿಧಾನ ಪರಿಷತ್ತಿನ ಸದಸ್ಯರು | ಸದಸ್ಯರು |
| 3) | ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಗೆ ಬರುವ ತಾಲ್ಲೂಕು ಪಂಚಾಯಿತಿ/ ತಾಲ್ಲೂಕು ಪಂಚಾಯಿತಿಗಳ ಅಧ್ಯಕ್ಷರು | ಸದಸ್ಯರು |
| 4) | ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಗೆ ಬರುವ ತಾಲ್ಲೂಕು ಪಂಚಾಯಿತಿ/ ತಾಲ್ಲೂಕು ಪಂಚಾಯಿತಿಗಳ ಉಪಾಧ್ಯಕ್ಷರು | ಸದಸ್ಯರು |

| | | |
|---|---|---|
| 5) | ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಗೆ ಬರುವ ತಾಲ್ಲೂಕು/ತಾಲ್ಲೂಕುಗಳ ಭಾಗಗಳನ್ನು ಪ್ರತಿನಿಧಿಸುವ ಜಿಲ್ಲಾ ಪಂಚಾಯತಿ ಸದಸ್ಯರುಗಳು. | ಸದಸ್ಯರು |
| 6) | ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಗೆ ಬರುವ ತಾಲ್ಲೂಕು/ತಾಲ್ಲೂಕುಗಳ ಭಾಗಗಳನ್ನು ಪ್ರತಿನಿಧಿಸುವ ತಾಲ್ಲೂಕು ಪಂಚಾಯತಿ ಸದಸ್ಯರುಗಳು. | ಸದಸ್ಯರು |
| 7) | ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಗೆ ಬರುವ ತಾಲ್ಲೂಕು/ತಾಲ್ಲೂಕುಗಳ ತಾಲ್ಲೂಕು ಮಟ್ಟದ ಅಧಿಕಾರಿಗಳು | ಸದಸ್ಯರು |
| 8) | ಸದಸ್ಯ ಕಾರ್ಯದರ್ಶಿಯ ತಾಲ್ಲೂಕನ್ನು ಹೊರತುಪಡಿಸಿ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಗೆ ಬರುವ ಇತರ ತಾಲ್ಲೂಕು ಪಂಚಾಯತಿ/ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿ | ಸದಸ್ಯರು |
| 9) | ವಿಧಾನ ಸಭಾ ಕ್ಷೇತ್ರದ ಅತಿ ಹೆಚ್ಚು ಭಾಗವನ್ನು ಪ್ರತಿನಿಧಿಸುವ ತಾಲ್ಲೂಕಿನ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ | ಸದಸ್ಯ ಕಾರ್ಯದರ್ಶಿಗಳು |

ಸದರಿ ಸಮಿತಿಯ ಕಾರ್ಯಚಟುವಟಿಕೆಗಳು ಈ ಕೆಳಗಿನಂತಿರುತ್ತವೆ:

| | |
|---|---|
| 1) | ಪಂಚಾಯತ್ ರಾಜ್ ಸಂಸ್ಥೆಗಳಿಂದ ಅನುಷ್ಠಾನಗೊಳ್ಳುತ್ತಿರುವ ಕಾರ್ಯಕ್ರಮಗಳ ಪರಿಶೀಲನೆ. |
| 2) | ಕಾರ್ಯಕ್ರಮಗಳ ಅನುಷ್ಠಾನದಲ್ಲಿ ಅವ್ಯವಹಾರ ನಡೆದಿದ್ದಲ್ಲಿ, ಅವುಗಳನ್ನು ಪತ್ತೆ ಹಚ್ಚಿ ಸೂಕ್ತ ಕ್ರಮವಹಿಸಲು ಸಂಬಂಧಪಟ್ಟವರಿಗೆ ವರದಿ ಸಲ್ಲಿಸುವುದು. |
| 3) | ದೂರುಗಳು ಏನಾದರೂ ಬಂದಲ್ಲಿ, ಅವುಗಳನ್ನು ಸ್ವೀಕರಿಸಿ ಅವುಗಳ ಬಗ್ಗೆ ತನಿಖೆ ಮಾಡಿ ಸಂಬಂಧಪಟ್ಟವರ ಮೇಲೆ ಕ್ರಮ ತೆಗೆದುಕೊಳ್ಳುವಂತೆ ಸಂಬಂಧಪಟ್ಟವರಿಗೆ ಶಿಫಾರಸ್ಸು ಮಾಡುವುದು. |
| 4) | ಯಾವ ಕಾರ್ಯಕ್ರಮಕ್ಕೆ ಹಣ ಬಿಡುಗಡೆ ಆಗಿದೆಯೋ ಅದೇ ಕಾರ್ಯಕ್ರಮಕ್ಕೆ ಹಣ ವಿನಿಯೋಗ ಆಗಿರುವ ಬಗ್ಗೆ ಖಾತ್ರಿಪಡಿಸಿಕೊಳ್ಳುವುದು. |
| 5) | ನಿಯಮಾವಳಿಗಳು ಮತ್ತು ಮಾರ್ಗಸೂಚಿಗಳನ್ವಯ ಕಾರ್ಯಕ್ರಮಗಳ ಅನುಷ್ಠಾನ ಆಗುತ್ತಿದೆಯೋ ಇಲ್ಲವೋ ಎಂಬ ಬಗ್ಗೆ ಪರಿಶೀಲಿಸುವುದು. |
| 6) | ಕಾರ್ಯಕ್ರಮಗಳ ಅನುಷ್ಠಾನ ಸುಧಾರಣೆಗೆ ಸಲಹೆಗಳನ್ನು ನೀಡುವುದು. |
| 7) | ಫಲಾನುಭವಿಗಳಿಗೆ ಸರಿಯಾಗಿ ಪ್ರಯೋಜನಗಳು ತಲುಪಿದ ಬಗ್ಗೆ ಖಾತ್ರಿಪಡಿಸಿಕೊಳ್ಳುವುದು. |
| 8) | ಯಾವುದೇ ಕಾರ್ಯಕ್ರಮದಡಿ ಗ್ರಾಮ ಸಭೆಯಿಂದ ಆಯ್ಕೆಯಾದ ಫಲಾನುಭವಿಗಳು ಅನರ್ಹ ಆಯ್ಕೆಯಾಗಿದ್ದಲ್ಲಿ ಅದನ್ನು ಪರಿಶೀಲಿಸಿ ಮರು ಗ್ರಾಮಸಭೆಯಲ್ಲಿ ಅರ್ಹ ಫಲಾನುಭವಿಗಳ ಆಯ್ಕೆ ಮಾಡಲು ಸಂಬಂಧಪಟ್ಟ ಪಂಚಾಯತ್ ರಾಜ್ ಸಂಸ್ಥೆಗೆ ಶಿಫಾರಸ್ಸು ಮಾಡುವುದು. |

ಸದಸ್ಯ ಕಾರ್ಯದರ್ಶಿಗಳು ಪ್ರತಿ ತ್ರೈಮಾಸಿಕದಲ್ಲಿ ಕನಿಷ್ಠ ಒಂದು ಸಭೆಯನ್ನು ನಡೆಸಲು ಕ್ರಮ ತೆಗೆದುಕೊಳ್ಳಬೇಕು. ಸಮಿತಿಯ ಅಧ್ಯಕ್ಷರಿಂದ ಸಭೆಯ ದಿನಾಂಕವನ್ನು ಪಡೆದು 7 ಕೆಲಸದ ದಿವಸಗಳ ಅವಧಿಯ ನೋಟೀಸನ್ನು ನೀಡಿ ಸಭೆ ನಡೆಸಬೇಕು. ಸಭೆ ನಡೆದ 3 ಕೆಲಸದ ದಿವಸಗಳ ಒಳಗಾಗಿ ನಡವಳಿಗಳನ್ನು ಹೊರಡಿಸಿ ಸಂಬಂಧಪಟ್ಟ ಎಲ್ಲಾ ಸದಸ್ಯರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಬೇಕು. ಅಲ್ಲದೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಮುಂದಿನ ಕ್ರಮ ಕೈಗೊಳ್ಳಲು ವರದಿ ಕಳುಹಿಸಬೇಕು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

19/1/10

(ಶ್ಯಾಮಲಾಲ್ ಎಂ. ಭಂಡಾರಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಿ 1000 ಪ್ರತಿಗಳನ್ನು ಕಳುಹಿಸಿಕೊಡುವಂತೆ ಕೋರಿದೆ.

ಪ್ರತಿ:

1. ಮುಖ್ಯ ಮಂತ್ರಿಯವರ ಪ್ರಧಾನ ಕಾರ್ಯದರ್ಶಿ
2. ಮುಖ್ಯ ಮಂತ್ರಿಯವರ ಕಾರ್ಯದರ್ಶಿ – 2
3. ಎಲ್ಲಾ ಸಚಿವರ/ರಾಜ್ಯ ಸಚಿವರ ಆಪ್ತ ಕಾರ್ಯದರ್ಶಿಗಳು
4. ರಾಜ್ಯದ ಎಲ್ಲಾ ಸಂಸತ್ ಸದಸ್ಯರುಗಳು (ರಾಜ್ಯ ಸಭೆ ಮತ್ತು ಲೋಕ ಸಭೆ)
5. ರಾಜ್ಯದ ವಿಧಾನ ಮಂಡಲದ ಎಲ್ಲಾ ಸದಸ್ಯರುಗಳು
6. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು
7. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು
9. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು
10. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಎಲ್ಲಾ ಇಲಾಖೆಗಳು
11. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಎಲ್ಲಾ ಶಾಖೆಗಳ ಮುಖ್ಯಸ್ಥರು.
12. ಅಧ್ಯಕ್ಷರು ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಎಲ್ಲಾ ಜಿಲ್ಲಾ ಪಂಚಾಯತಿಗಳು
13. ಅಧ್ಯಕ್ಷರು ಹಾಗೂ ಕಾರ್ಯನಿರ್ವಾಹಕ ಅಧಿಕಾರಿಗಳು, ಎಲ್ಲಾ ತಾಲ್ಲೂಕು ಪಂಚಾಯತಿಗಳು
14. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು
15. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾ.ಅ.ಪ. ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು
16. ಸರ್ಕಾರದ ಕಾರ್ಯದರ್ಶಿಗಳು (ಪಂ.ರಾ.) ಗ್ರಾ.ಅ.ಪ. ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು
17. ಹೆಚ್ಚುವರಿ ಪ್ರತಿ.